# ಮಂಗಳ ಶ್ರೀ ತುಳಸಿದೇವಿಗೆ ಜಯ ಮಂಗಳ

1. **Ref.:** Dasara Padagalu – Purandara Dasara Keerthane, Samyukta Samputa, Edited by Shri Pavanje Gururao, Sriman Madhwa Siddantha Granthalaya, Udupi
2. **Note:** These lyrics are fully followed by the singer.

ರಾಗ: ನಾದನಾಮಕ್ರಿಯೆ ತಾಳ: ಛಾಪು

ಮಂಗಳ ಶ್ರೀ ತುಳಸಿದೇವಿಗೆ
ಜಯ ಮಂಗಳ ವೃಂದಾವನ ದೇವಿಗೆ || ಪ ||

ನೋಡಿದ ಮಾತ್ರಕೆ ದೋಷ ಸಂಹಾರಿಗೆ
ಬೇಡಿದ ವರಗಳ ಕೊಡುವಳಿಗೆ
ಮಾಡೆ ವಂದನೆಯನು ಮನುಜರ ಪಾಪದ
ಗೂಡನೀಡಾಡುವ ಗುಣವಂತೆಗೆ || 1 ||

ಮುಟ್ಟೀದ ಮಾತ್ರಕ್ಕೆ ಮುಕ್ತರ ಮಾಡುವ
ಮುದದಿಂದುದ್ಧರಿಸುವ ಮುನಿ ವಂದ್ಯೆಗೆ
ಕೊಟ್ಟರೆ ನೀರನು ಬೇರಿಗೆ ಕಾಲನ
ಮುಟ್ಟಲೀಸದ ಹಾಗೆ ಮಾಳ್ಪಳಿಗೆ || 2 ||

ಬಿತ್ತಿ ಬೆಳಸಿ ತನ್ನ ಹೆಚ್ಚಿಸಿದವರಿಗೆ
ಚಿತ್ತವಲ್ಲಭ ಕೃಷ್ಣನ ಹರುಷದಲಿ
ಅತ್ಯಂತವಾಗಿ ತಾ ತೋರಿ ಭವದ ಬೇರ
ಕಿತ್ತು ಬಿಸಾಡುವ ಕೋಮಲೆಗೆ || 3 ||

ಕೋಮಲವಾಗಿದ್ದ ದಳ ಮಂಜರಿಗಳ
ಪ್ರೇಮದಿಂದಲಿ ತಂದು ಶ್ರೀ ಹರಿಗೆ
ನೇಮದಿಂದರ್ಚಿಸೆ ಪರಮಾತ್ಮನೊಳು ಜೀವ
ಕಾಮಿತಾರ್ಥವನೀವ ಸದ್ಗುಣಿಗೆ || 4 ||

ಕಾಷ್ಟವ ತಂದು ಗಂಧವ ಮಾಡಿ ಕೃಷ್ಣಗೆ
ನಿಷ್ಠೆಯಿಂದಲಿ ಲೇಪನ ಮಾಳ್ಪರ
ಜ್ಯೇಷ್ಠರೆನಿಸಿ ವೈಕುಂಠದಿ ನಿಲಿಸಿ
ಸಂತುಷ್ಟರ ಮಾಡುವ ಸೌಭಾಗ್ಯೆಗೆ || 5 ||

ಅನ್ನವನುಂಡರು ನೀಚರ ಮನೆಯಲ್ಲಿ
ಉನ್ನತ ಪಾಪವ ಮಾಡಿದ್ದರೂ
ತನ್ನ ದಳವನೊಂದ ಕರ್ಣದಲ್ಲಿಟ್ಟರೆ
ಧನ್ಯರ ಮಾಡುವ ದಯವಂತೆಗೆ || 6 ||

ಸರಸಿಜ ನಾಭನ ಸಲಿಗೆಯ ರಾಣಿಗೆ
ಶರಣ ಜನರ ಪೊರೆವ ಸದ್ಗುಣಿಗೆ
ತಿರುಪತಿ ನಿಲಯ ಶ್ರೀ ಪುರಂದರ ವಿಠ್ಠಲನ
ಚರಣ ಸೇವಕಳಾದ ಚಿನ್ಮಯೆಗೆ || 7 ||

**Classification:** Keerthane
**Ankita:** sri purandara vittala
**Location:** NA
**Category:** Tulasi Song
**Sub-Category:** tulasi, Krishna, mangala, vrindavana, nara, papa, muni, niru, paramatma, jiva, gandha, vaikunta, anna, kivi, dhanya, sharana, Tirupati, archane, arasi,
**Pravachana:** NA
**Explanation:** NA